ಬಾಪೂಜಿ ವಿದ್ಯಾಸಂಸ್ಥೆ ನಡೆಸುತ್ತಿರುವ ದಂತ ಕಾಲೇಜು

3782 - ಶ್ರೀ ಪ್ರಭಾಕರ್ ಎಸ್. ರಾಣೆ (ಕಾರವಾರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಾಪೂಜಿ ವಿದ್ಯಾಸಂಸ್ಥೆ ನಡೆಸುತ್ತಿರುವ ದಂತ ಕಾಲೇಜು ದಾವಣಗೆರೆಗೆ 105 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಕ್ಕಾಗಿ ಅನುಮತಿ ನೀಡಿರುವುದು ನಿಜವಲ್ಲವೇ?*

ಆ) *ಸರ್ಕಾರದ ಪೂರ್ವಾನುಮತಿ ಇಲ್ಲದೇ ಮೇಲಿನ ಕಾಲೇಜಿಗೆ 200 ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ಆವರ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ವಿದ್ಯಾರ್ಥಿಗಳ ಈ ಅನಧಿಕೃತ ಪ್ರವೇಶದ ಬಗ್ಗೆ ವಿಚಾರಣೆಯನ್ನು ನಡೆಸಲಾಗುವುದೇ ಮತ್ತು ವಿದ್ಯಾರ್ಥಿಗಳ ಹಿತಾಸಕ್ತಿಯಿಂದ ಹೆಚ್ಚಿನ ಪ್ರವೇಶವನ್ನು ಇತರೇ ವೈದ್ಯಕೀಯ ಕಾಲೇಜುಗಳಿಗೆ ವರ್ಗ ಮಾಡಲಾಗುವುದೇ?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಸರ್ಕಾರವು ಅನುಮತಿ ನೀಡಿರುವ ಸರ್ಕಾರಿ ಆದೇಶ ಸಂಖ್ಯೆ :ಆಕುಕ 126 ಎಂಎಂಇ 90, ದಿನಾಂಕ.19.2.91 5.3.1991 ಮತ್ತು 12.8.1991 ರಂತೆ 90-91 ಮತ್ತು 1991-92ನೇ ಸಾಲಿಗೆ ಮೊದಲನೇ ಬಿಡಿಎಸ್‌ಗೆ ಬಾಪೂಜಿ ದಂತ ಕಾಲೇಜು, ದಾವಣಗೆರೆಗೆ 110+90 ಪ್ರವೇಸ ಸ್ಥಾನಗಳನ್ನು ನಿಗದಿಪಡಿಸಿರುತ್ತದೆ.

ಇ) ಉದ್ಭವಿಸುವುದಿಲ್ಲ.

ದಂತ ಕಾಲೇಜು ಮತ್ತು ಅದಕ್ಕೆ ಸಂಬಂಧಿಸಿದ ಆಸ್ಪತ್ರೆಗಳಿಗೆ ತನಿಖೆ ನಡೆಸಿರುವುದು.

3783 - ಶ್ರೀ ಪ್ರಭಾಕರ್ ಎಸ್. ರಾಣೆ (ಕಾರವಾರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ವತಿಯಿಂದ ವೈದ್ಯಕೀಯ: ದಂತ ಕಾಲೇಜುಗಳಿಗೆ ಮತ್ತು ಅದಕ್ಕೆ ಸಂಬಂಧಿಸಿದ ಆಸ್ಪತ್ರೆಗಳಿಗೆ ಕ್ರಮವಾಗಿ ತನಿಖೆಯನ್ನು ನಡೆಸುತ್ತಿರುವುದು ನಿಜವಲ್ಲ, ಅಲ್ಲವೇ?*

ಆ) *ಹಾಗಿದ್ದಲ್ಲಿ ಈಗ ತನಿಖೆ ನಡೆಸದಿರಲು ಕಾರಣವೇನು?*

ಇ) *ಮೇಲಿನ ಸಂಸ್ಥೆಗಳಲ್ಲಿ ಬೋಧನಾ ಸಿಬ್ಬಂದಿಯ ಸರಿಯಾದ ಹಾಜರಾತಿ ಇಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಗಮನಕ್ಕೆ ಬಂದಿದೆಯೇ?*

ಈ) *ಈ ಲೋಪದೋಷವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳಬಹುದಾದ ಕ್ರಮಗಳೇನು?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ವೈದ್ಯಕೀಯ :ದಂತ ಕಾಲೇಜುಗಳಿಗೆ ಮತ್ತು ಅದಕ್ಕೆ ಸಂಬಂಧಿಸಿತ ಆಸ್ಪತ್ರೆಗಳಿಗೆ ನಿರ್ದೇಶಕರು, ವೈದ್ಯಕೀಯ ಶಿಕ್ಷಣ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣರವರು ತನಿಖೆ ನಡೆಸುತ್ತಿರುವುದು ನಿಜ.

ಆ) ಉದ್ಭವಿಸುವುದಿಲ್ಲ